ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1387
2	ಸದಸ್ಯರ ಹೆಸರು	ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)
3	ಉತ್ತರಿಸಬೇಕಾದ ದಿನಾಂಕ	09.03.2022
4	ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 11-ಇ ಅರ್ಜಿ ವಿಲೇವಾರಿಯಾಗದೇ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು;	ಬಂದಿದೆ. **ಬಾಕಿ 11ಇ ಅರ್ಜಿಗಳ ತ್ವರಿತ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮಗಳು:-** 1) ಇಲಾಖೆಯಲ್ಲಿ ಅಳತೆ ಕೋರಿ ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು ಮೋಜಿಣಿ ತಂತ್ರಾಂಶದ ಮುಖಾಂತರ ಆನ್‌ಲೈನ್‌ನಲ್ಲಿ ಸ್ವೀಕರಿಸಲಾಗುತ್ತಿದ್ದು ತಂತ್ರಾಂಶದ ಪ್ರತಿ ಹಂತದಲ್ಲಿಯೂ FIFO(ಸರದಿ ಸಾಲಿನಂತೆ) ಅಳವಡಿಸಲಾಗಿದೆ. ಸರದಿ ಸಾಲಿನಂತೆ ಅಳತೆಗಾಗಿ ಭೂಮಾಪಕರಿಗೆ ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ವಿತರಿಸಲಾಗುತ್ತಿದೆ. ಪ್ರಕರಣದಲ್ಲಿ ಅಳತೆಯಾದ ನಂತರ ಭೂಮಾಪಕರು ಕಡತಗಳನ್ನು ಹಂಚಿಕೆಯಾದ ಸರದಿ ಸಾಲಿನಂತೆ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು ಹಾಗೂ ಅಪ್‌ಲೋಡ್ ಮಾಡಿರುವ ಕಡತಗಳ ಪರಿಶೀಲನೆ ಮತ್ತು ಅನುಮೋದನೆಯನ್ನು ಸಹಾ ತಂತ್ರಾಂಶದ ಮುಖಾಂತರ ಆನ್‌ಲೈನ್‌ನಲ್ಲೇ ಸರದಿ ಸಾಲಿನಂತೆ ನಿರ್ವಹಿಸುವ ಮೂಲಕ, ಪ್ರಕರಣಗಳ ವಿಲೇವಾರಿಯಲ್ಲಿ ಯಾವುದೇ ವಿಳಂಬಕ್ಕೆ ಅವಕಾಶವಿಲ್ಲದಂತೆ ಕ್ರಮ ವಹಿಸಲಾಗುತ್ತಿದೆ. 2) ಕಂದಾಯ ಇಲಾಖೆಯಿಂದ ಪಹಣಿ ತಿದ್ದುಪಡಿ ಕುರಿತು ಕಂದಾಯ ಅದಾಲತ್ ಗಳನ್ನು ನಡೆಸಲಾಗುತ್ತಿದೆ 3) ನಮೂನೆ 1 ರಿಂದ 5 ಅನ್ನು ಭರ್ತಿ ಮಾಡಲು ಅಗತ್ಯ ಸೂಚನೆ ಮತ್ತು ಮಾರ್ಗಸೂಚಿಗಳನ್ನು ನೀಡ ಲಾಗಿದೆ. 4) ವಿಡಿಯೋ ಸಂವಾದ ಮತ್ತು ವಿಭಾಗವಾರು ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಿ ಹೆಚ್ಚಿನ ಪ್ರಗತಿ ಸಾಧಿಸಲು ಸೂಕ್ತ ಮಾರ್ಗದರ್ಶನ ಮತ್ತು ಅಗತ್ಯ ಸೂಚನೆ ನೀಡಲಾ ಗುತ್ತಿದೆ. 5) ಹೆಚ್ಚಿನ ಪ್ರಕರಣಗಳು ಬಾಕಿ ಇರುವ ತಾಲ್ಲೂಕುಗಳಿಗೆ ಕಡಿಮೆ ಪ್ರಕರಣಗಳು ಬಾಕಿ ಇರುವ ತಾಲ್ಲೂಕಿನಿಂದ ಭೂಮಾಪಕರನ್ನು ನಿಯೋಜನೆ ಮಾಡಿ ಪ್ರಕರಣಗಳನ್ನು ವಿಲೇಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. 6) 2072 ಪರವಾನಗಿ ಭೂಮಾಪಕರ ಆಯ್ಕೆ ಕುರಿತು ಅಧಿಸೂಚನೆ ಹೊರಡಿಸಿ ಅರ್ಜಿಗಳನ್ನು ಆಹ್ವಾನಿಸಿ, ಪರೀಕ್ಷೆಯನ್ನು ನಡೆಸಿ, ಜಿಲ್ಲಾವಾರು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ತರಬೇತಿ ನಂತರ ಉತ್ತೀರ್ಣವಾದ 1279 ಜನರಿಗೆ ಪರವಾನಗಿ ನೀಡಿ

		ರಾಜ್ಯದ ವಿವಿಧ ನಿಯೋಜಿತ ತಾಲ್ಲೂಕುಗಳಿಗೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಹಾಗೂ ಅದೇ ರೀತಿ ಹಾಲಿ 508 ಜನರು ತರಬೇತಿ ಪಡೆಯುತ್ತಿದ್ದು, ತರಬೇತಿ ನಂತರ ಉತ್ತೀರ್ಣರಾದವರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಕಾರ್ಯ ನಿಯೋಜಿಸಲಾಗುವುದು. **7)** ಅವಶ್ಯಕತೆಗನುಗುಣವಾಗಿ ಹೊಸದಾಗಿ 3000 ಪರವಾನಗಿ ಭೂಮಾಪಕರನ್ನು ಆಯ್ಕೆ ಮಾಡಿಕೊಳ್ಳಲು ಭೂಮಾಪನ ಇಲಾಖೆ ವತಿಯಿಂದ ದಿನಾಂಕ 28-12-2021ರಂದು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪ್ರವೇಶ ಪರೀಕ್ಷೆ ನಡೆಸಿ ಜಿಲ್ಲಾವಾರು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ, ತರಬೇತಿ ನಂತರ ಉತ್ತೀರ್ಣ ರಾದವರಿಗೆ ಪರವಾನಗಿ ನೀಡಿ ರಾಜ್ಯದ ವಿವಿಧ ತಾಲ್ಲೂಕುಗಳಿಗೆ ಕಾರ್ಯ ನಿಯೋಜಿಸಲಾಗುತ್ತಿದೆ.
ಆ)	" ಕಂದಾಯ ಅದಾಲತ್" ನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯು ಒಳಪಡದ ಇರುವುದರಿಂದ ಪಹಣಿ ತಿದ್ದುಪಡಿ ಪ್ರಕರಣಗಳು ನಿರೀಕ್ಷಿತ ಮಟ್ಟದಲ್ಲಿ ವಿಲೇವಾರಿಯಾಗದೇ ಉಳಿದು ಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ರವರು ದಿನಾಂಕ: 18.03.2020ರ ಪತ್ರದಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ "ಕಂದಾಯ ಅದಾಲತ್" ಆಂದೋಲನದ ಅವಧಿ ವಿಸ್ತರಿಸುವ ಅವಶ್ಯಕತೆ ಇರುವುದಿಲ್ಲ ಎಂದು ತಿಳಿಸಿರುವುದರಿಂದ ದಕ್ಷಿಣ ಕನ್ನಡ ಜಿಲ್ಲೆಯನ್ನು ಹೊರತುಪಡಿಸಲಾಗಿರುತ್ತದೆ.

ಸಂಖ್ಯೆ: ಕಂಇ 61 ಎಸ್ಎಸ್ಸಿ 2022

(ಆರ್.ಅಶೋಕ)
ಕಂದಾಯ ಸಚಿವರು